**ರಾಜ್ಯ ಹೆದ್ದಾರಿ ಕಾಮಗಾರಿ**

269 (287) ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಫ್ಜಲ್‌ಪುರ್): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಲ್ಲಿ ಮಂಜೂರಾದ ಚೌದಾಪುರ ಗುಲಬರ್ಗಾ ರಸ್ತೆ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಕೂಡಲೇ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ;

ಇ) ಈ ರಸ್ತೆಯು ಸಾರ್ವಜನಿಕ ಸಂಚಾರಕ್ಕೆ ಯೋಗ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ, ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಲು ಸರ್ಕಾರದ ತುರ್ತು ಕ್ರಮಗಳೇನು ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ಬಂದಿದೆ.

ಆ) ಗುಲ್ಬರ್ಗಾದಿಂದ ಚೌಡಾಪುರವರೆಗಿನ 30 ಕಿ.ಮೀ.ಗಳ ರಸ್ತೆ ಅಭಿವೃದ್ಧಿಯನ್ನು ಯೋಜನೆಯ ಪ್ರಥಮ ಹಂತದಲ್ಲಿ ವಿಶ್ವಬ್ಯಾಂಕ್ ಆರ್ಥಿಕ ನೆರವಿನೊಂದಿಗೆ ಕೈಗೊಳ್ಳಲು ಯೋಜಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಈ ದಿಸೆಯಲ್ಲಿ ಬಿಡ್ ಮೌಲ್ಯಮಾಪನದ ವರದಿಗೆ ಆಕ್ಷೇಪಣ ರಹಿತ ಪತ್ರದ ಅನುಮೋದನೆಯನ್ನು ವಿಶ್ವಬ್ಯಾಂಕ್‌ನಿಂದ

ಶೀಘ್ರದಲ್ಲಿಯೇ ನಿರೀಕ್ಷಿಸಲಾಗಿದ್ದು, ಅನುಮೋದನೆ ನಂತರ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಬಂದಿದೆ.

ಈ) ಗುಲ್ಬರ್ಗಾದಿಂದ ಚೌಡಾಪುರವರೆಗಿನ 30 ಕಿ.ಮೀ.ಗಳ ರಸ್ತೆ ಅಭಿವೃದ್ಧಿಯನ್ನು ಯೋಜನೆಯ ಪ್ರಥಮ ಹಂತದಲ್ಲಿ ವಿಶ್ವಬ್ಯಾಂಕ್ ಆರ್ಥಿಕ ನೆರವಿನೊಂದಿಗೆ ಕೈಗೊಳ್ಳಲು ಯೋಜಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಈ ದಿಸೆಯಲ್ಲಿ ಬಿಡ್ ಮೌಲ್ಯಮಾಪನದ ವರದಿಗೆ ಆಕ್ಷೇಪಣ ರಹಿತ ಪತ್ರದ ಅನುಮೋದನೆಯನ್ನು ವಿಶ್ವಬ್ಯಾಂಕ್‌ನಿಂದ ಶೀಘ್ರದಲ್ಲಿಯೇ ನಿರೀಕ್ಷಿಸಲಾಗಿದ್ದು, ಅನುಮೋದನೆ ನಂತರ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

**ಎಂ.ಕೆ. ಹುಬ್ಬಳ್ಳಿ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿನ ಅವ್ಯವಹಾರ ಕುರಿತು**

270 (431) ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು): ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎಂ.ಕೆ. ಹುಬ್ಬಳ್ಳಿ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಅನೇಕ ಅವ್ಯವಹಾರಗಳಿದ್ದರೂ, ಸಹಕಾರ ಸಂಘ ಕಾಯ್ದೆಯ 64ರ ಅಡಿಯಲ್ಲಿ 6–7 ತಿಂಗಳಿನಿಂದ ತನಿಖೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಈ ತನಿಖೆಯು ಯಾವಾಗ ಮುಕ್ತಾಯವಾಗುತ್ತದೆ; ಮುಕ್ತಾಯವಾದ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು):

ಅ) ಹೌದು.